ದಿನಾಂಕ: 22-01-2018,
ಸ್ಥಳ: ಬೆಂಗಳೂರು,

## ಪತ್ರಿಕಾ ಪ್ರಕಟಣೆಗಾಗಿ

# ಪಂಚಾಯತ್ ರಾಜ್ ಸಬಲೀಕರಣ ಹಾಗೂ ಗ್ರಾಮ ಸ್ವರಾಜ್ ಸ್ಥಾಪನೆಯ ಆಶಯಗಳ ಸಾಕಾರದ ನಡೆಗೆ ಗ್ರಾಮ ಪಂಚಾಯತ್ ಹಕ್ಕೊತ್ತಾಯದ ಸಂಪೂರ್ಣ ಬೆಂಬಲ

ಪಂಚಾಯತ್ ರಾಜ್ ಸಬಲೀಕರಣಕ್ಕಾಗಿ ಮತ್ತು ಅಧಿಕಾರ ವಿಕೇಂದ್ರೀಕರಣ ವ್ಯವಸ್ಥೆಯನ್ನು ಅನುಷ್ಠಾನಗೊಳಿಸುವುದಕ್ಕಾಗಿ ಸರ್ಕಾರವನ್ನು ಒತ್ತಾಯಿಸಲು ಹಾಗೂ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿರುವ ಸಮಸ್ಯೆಗಳ ಬಗ್ಗೆ ಸರ್ಕಾರದ ಗಮನ ಸೆಳೆಯಲು ದಿನಾಂಕ 23.01.2018 ರಂದು ಶ್ರೀ ಕೋಟ ಶ್ರೀನಿವಾಸ ಪೂಜಾರಿ, ಸ್ಥಳೀಯಾಡಳಿತ ಕ್ಷೇತ್ರದಿಂದ ಆಯ್ಕೆಯಾದ ವಿಧಾನ ಪರಿಷತ್ ಸದಸ್ಯರು ಪಕ್ಷಾತೀತವಾಗಿ ತಮ್ಮ ಸಹ ಸದಸ್ಯರ ಜೊತೆ ಸೇರಿ ವಿಧಾನಸೌಧ ಮತ್ತು ವಿಕಾಸಸೌಧದ ನಡುವೆ ಇರುವ ಗಾಂಧಿ ಪ್ರತಿಮೆ ಎದುರು ಧರಣಿ ಸತ್ಯಾಗ್ರಹ ನಡೆಸಲಿದ್ದಾರೆ. **ಸಾಂವಿಧಾನಿಕವಾಗಿ ಹಾಗೂ ಶಾಸನಬದ್ಧವಾಗಿ ಕೊಟ್ಟಿರುವ ಸ್ಥಳೀಯಾಡಳಿತ ಸಂಸ್ಥೆಗಳ ಹಕ್ಕು-ಅಧಿಕಾರ-ಜವಾಬ್ದಾರಿಗಳನ್ನು ಎತ್ತಿ ಹಿಡಿಯುವಲ್ಲಿ ನಡೆಸುತ್ತಿರುವ ಈ ಸತ್ಯಾಗ್ರಹವನ್ನು ಗ್ರಾಮ ಪಂಚಾಯತ್ ಹಕ್ಕೊತ್ತಾಯ ಆಂದೋಲನ ಸಂಪೂರ್ಣವಾಗಿ ಬೆಂಬಲಿಸುತ್ತದೆ.**

ತಮ್ಮ ಕ್ಷೇತ್ರವಾದ ಸ್ಥಳೀಯಾಡಳಿತ ಸಂಸ್ಥೆಗೆ ವಿಧಾನಪರಿಷತ್ ಸದಸ್ಯರೆಲ್ಲರೂ ಒಟ್ಟಾಗಿ ತೋರುತ್ತಿರುವ ಬದ್ಧತೆ ಇದಾಗಿದೆ. ಈ ಹಿಂದೆಯೂ 2016ರ ನವೆಂಬರ್‌ನಲ್ಲಿ ಬೆಳಗಾಂನಲ್ಲಿ ನಡೆದ ಚಳಿಗಾಲದ ಅಧಿವೇಶನದಲ್ಲಿ ಈ ಎಲ್ಲಾ ವಿಧಾನಪರಿಷತ್ ಸದಸ್ಯರು ಒಕ್ಕೊರೊಲಿನಿಂದ ವಿಕೇಂದ್ರೀಕೃತ ಪ್ರಜಾತಂತ್ರ ವ್ಯವಸ್ಥೆಗೆ ಒತ್ತು ನೀಡುವ ಗ್ರಾಮ ಸ್ವರಾಜ್ ಕಾಯಿದೆಯ ಸಂಪೂರ್ಣ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸರ್ಕಾರವನ್ನು ಒತ್ತಾಯಿಸಿದ್ದನ್ನು ನಾವಿಲ್ಲಿ ಸ್ಮರಿಸಬಹುದು.

ಸಂವಿಧಾನದ 73ನೇ ತಿದ್ದುಪಡಿಯ ಆಶಯಕ್ಕೆ ಅನುಗುಣವಾಗಿ 2016ರಲ್ಲಿ ಜಾರಿಗೆ ಬಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯಿದೆಯು ವಿಕೇಂದ್ರೀಕರಣ ವ್ಯವಸ್ಥೆಯನ್ನು ಸಾಕಾರಗೊಳಿಸುವಲ್ಲಿ ರಾಜ್ಯ ಸರ್ಕಾರ ರೂಪಿಸಿದ ಕಾಯಿದೆಗಳಲ್ಲಿ ದೇಶಕ್ಕೇ ಒಂದು ಮಾದರಿ. **ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯಿದೆಯ ಪ್ರಕರಣ 3ಇ ಗ್ರಾಮ ಸಭೆಯ ಪರಮಾಧಿಕಾರವನ್ನು** ಸ್ಪಷ್ಟಪಡಿಸಿದೆ. ಅಲ್ಲದೇ ವಿಕೇಂದ್ರೀಕೃತ ಪ್ರಜಾತಂತ್ರ ವ್ಯವಸ್ಥೆಯ ಮೂಲಘಟಕವಾದ **ಗ್ರಾಮ ಪಂಚಾಯತ್‌ಗಳು ಸ್ವತಂತ್ರ ಸ್ವಯಮಾಡಳಿತ ಘಟಕಗಳಾಗಿ** ಕಾರ್ಯನಿರ್ವಹಿಸಲು ಪೂರಕವಾದ ಹಲವಾರು ಅಂಶಗಳಿಗೆ ಈ ಕಾಯಿದೆಯು ಪುಷ್ಠಿ ನೀಡಿದೆ. ಹೊಣೆ, ಹಣಕಾಸು ಮತ್ತು ಹೊಣೆಗಾರರು- ಹೀಗೆ 3ಎಫ್‌ಗಳ ಹಸ್ತಾಂತರ, ಗ್ರಾಮೀಣ ಅಭಿವೃದ್ಧಿಯ ಚಟುವಟಿಕೆಗಳನ್ನು ಯೋಜಿಸುವಲ್ಲಿ, ಅನುಷ್ಠಾನಕ್ಕೆ ತರುವಲ್ಲಿ, ಮೇಲ್ವಿಚಾರಣೆ ಮಾಡುವುದರಲ್ಲಿ ಮತ್ತು ಮೌಲ್ಯಮಾಪನ ಮಾಡುವುದರಲ್ಲಿ ಗ್ರಾಮದ ಎಲ್ಲಾ ನಾಗರಿಕರಿಗೆ ನೇರವಾಗಿ ಭಾಗಿಯಾಗುವ ಅವಕಾಶ ಕಲ್ಪಿಸುವುದರ ಮೂಲಕ ಪಂಚಾಯತ್ ರಾಜ್ ವ್ಯವಸ್ಥೆಯ ಹಾಗೂ ಭಾಗವಹಿಸುವಿಕೆಯ ಪ್ರಜಾಪ್ರಭುತ್ವದ ತಳಹದಿಯನ್ನು ಸಶಕ್ತಗೊಳಿಸುವಲ್ಲಿ ಅಗತ್ಯವಿರುವ ಕ್ರಮಗಳಿಗೆ ಈ ಕಾಯಿದೆ ಅವಕಾಶ ಮಾಡಿಕೊಟ್ಟಿದೆ.

ಹೀಗಿದ್ದಾಗ್ಯೂ, ಮಹಾತ್ಮಾ ಗಾಂಧೀಜಿಯವರ ಕಲ್ಪನೆಯ ಗ್ರಾಮ ಸ್ವರಾಜ್ ಸ್ಥಾಪಿಸುವ ಮಹದಾಶಯದಿಂದ ರೂಪಿತವಾದ ಈ ಕಾಯಿದೆಯ ಅನುಷ್ಠಾನ ಪ್ರಕ್ರಿಯೆಯಲ್ಲಿ ರಾಜ್ಯ ಸರ್ಕಾರ ಎಡವಿದೆ. ಕಾಯಿದೆಯ ಸಂಪೂರ್ಣ ಪರಿಣಾಮಕಾರಿ ಅನುಷ್ಠಾನ ಪ್ರಕ್ರಿಯೆಯನ್ನು ವ್ಯವಸ್ಥಿತವಾಗಿ ಆರಂಭಿಸುವ ಬದಲಾಗಿ ಅಧಿಕಾರಶಾಹಿ ಹಿತಾಸಕ್ತಿಗಳ ಒತ್ತಾಸೆಗೆ ಕಟ್ಟುಬಿದ್ದ ಸರ್ಕಾರವು ಕಾಯಿದೆಯ ಕೆಲವೊಂದು ಎಳೆಗಳನ್ನು ಮಾತ್ರ ಪರಿಗಣಿಸಿ ಅದನ್ನು ಜಾಳು-ಜಾಳಾಗಿ ಕೆಲವೊಂದು ಅಂಶಗಳ ಅನುಷ್ಠಾನ ಪ್ರಕ್ರಿಯೆಗೆ ಮಾತ್ರ ಸರ್ಕಾರಿ ಸುತ್ತೋಲೆಗಳ ಮೂಲಕ ಕ್ರಮ ಕೈಗೊಂಡಿದ್ದು ಇದರಿಂದಾಗಿ ಕಾಯಿದೆಯ ಮೂಲ ಉದ್ದೇಶಕ್ಕೇ ಧಕ್ಕೆಯಾಗಿದೆ. ಹೀಗಾಗಿ ಕಾಯಿದೆ ಜಾರಿಯಾಗಿ ಎರಡು ವರ್ಷ ಕಳೆಯುವುದರೊಳಗೇ ಇಲಾಖೆಗಳಿಂದ, ಬೇರೆ ಬೇರೆ ಹಂತದ ಸರ್ಕಾರಗಳಿಂದ ಗ್ರಾಮ ಸಭೆ ಹಾಗೂ ಗ್ರಾಮ ಪಂಚಾಯತ್‌ಗಳ ಅಧಿಕಾರ ಕಿತ್ತುಕೊಳ್ಳುವ ಪ್ರಕ್ರಿಯೆ ಅನುಷ್ಠಾನ ಹಂತದವರೆಗೂ ಯಾರ ಗಮನಕ್ಕೂ ಬಾರದಂತೆ ವ್ಯವಸ್ಥಿತವಾಗಿ ಪ್ರಾರಂಭವಾಗುತ್ತಿದೆ. ಆ ಮೂಲಕ ಕಾನೂನಿನ ಆಶಯವನ್ನು ಮೂಲೆಗುಂಪಾಗಿಸಿ, ಅದರ ಸಾಕಾರಗೊಳಿಸುವಿಕೆಯನ್ನು ಬದಿಗೊತ್ತಿ ಕಾನೂನನ್ನು ಎತ್ತಿಹಿಡಿಯಬೇಕಾದವರೇ ಕಾನೂನಿನ ಉಲ್ಲಂಘನೆ, ಅದನ್ನು ಮೊಟಕುಗೊಳಿಸುವ ಪ್ರಯತ್ನಕ್ಕೆ ಕೈಹಾಕುತ್ತಿದ್ದಾರೆ.

ಈ ಹಿನ್ನೆಲೆಯಲ್ಲಿ ಸ್ಥಳೀಯಾಡಳಿತ ಕ್ಷೇತ್ರದಿಂದ ಆಯ್ಕೆಯಾದ ವಿಧಾನ ಪರಿಷತ್ ಸದಸ್ಯರು ಪಕ್ಷಬೇಧ ಮರೆತು ಪಂಚಾಯತ್ ರಾಜ್ ಸಬಲೀಕರಣದ ಪರವಾಗಿ ಒಗ್ಗೂಡಿ ತಮ್ಮ ಧ್ವನಿ ಎತ್ತುತ್ತಿರುವುದು ಒಂದು ಆಶಾದಾಯಕ ನಡೆಯಾಗಿದೆ. **ಇಂತಹ ಎಲ್ಲಾ ನಡೆಗಳನ್ನೂ ಗ್ರಾಮ ಪಂಚಾಯತ್ ಹಕ್ಕೊತ್ತಾಯ ಆಂದೋಲನ ಬೆಂಬಲಿಸುವುದಲ್ಲದೇ, ಜೊತೆಯಾಗಿ ಹೆಜ್ಜೆ ಇಡುತ್ತದೆ. ಈಗಲಾದರೂ ತಾನೇ ರೂಪಿಸಿದ ಕಾಯಿದೆಯ ಮೂಲಸಾರವನ್ನು ಸೂಕ್ಷ್ಮವಾಗಿ ಅರ್ಥೈಸಿಕೊಂಡು ಅದರ ಸಂಪೂರ್ಣ ಪರಿಣಾಮಕಾರಿ ಅನುಷ್ಠಾನಕ್ಕೆ ಗಂಭೀರ, ಅರ್ಥಪೂರ್ಣ, ದಿಟ್ಟ ಹೆಜ್ಜೆಯನ್ನು ಇಡಬೇಕೆಂದು ಗ್ರಾಮ ಪಂಚಾಯತ್ ಹಕ್ಕೊತ್ತಾಯ ಆಂದೋಲನ ರಾಜ್ಯ ಸರ್ಕಾರವನ್ನು ಆಗ್ರಹಿಸುತ್ತದೆ.**

ಇತಿ ತಮ್ಮ ವಿಶ್ವಾಸಿ,

ಗ್ರಾಮ ಪಂಚಾಯತ್ ಹಕ್ಕೊತ್ತಾಯ ಆಂದೋಲನದ ಪರವಾಗಿ

***ಸ್ಫೂರ್ತಿದಾತರು:***

**ಶ್ರೀ ಎಲ್.ಸಿ.ಜೈನ್,**
ಮಾಜಿ ಸದಸ್ಯರು, ರಾಷ್ಟ್ರೀ0ಯ 0ಯೋಜನಾ ಆ0ಯೋಗ ಮತ್ತು ದಕ್ಷಿಣ ಆಫ್ರಿಕಾದ ಮಾಜಿ ಭಾರತೀ0ಯ ರಾ0ಯಭಾರಿಗಳು

**ಶ್ರೀ ಮನು ಕುಲಕರ್ಣಿ,** ಗೌರವಾನ್ವಿತ ಹಿರಿಯ ಫೆಲೋ, ಸಾಮಾಜಿಕ ವಿಜ್ಞಾನಗಳ ಸಂಸ್ಥೆ, ಬೆಂಗಳೂರು

***ಸಲಹಾ ಸಮಿತಿ ಸದಸ್ಯರು:***

**ಡಾ. ವಿನೋದ್ ವ್ಯಾಸುಲು,**
ವಿಕೇಂದ್ರೀಕರಣ ಚಿಂತಕರು

**ಶ್ರೀ ಚಿರಂಜೀವ್ ಸಿಂಗ್** ಬೆಂಗಳೂರು, ಮಾಜಿ ಅಭಿವೃದ್ಧಿ ಆ0ಯುಕ್ತರು, ಕರ್ನಾಟಕ ಸರಕಾರ

**ಶ್ರೀ ಮೀನಾಕ್ಷಿ ಸುಂದರಂ,** ಮಾಜಿ ಕಾ0ರ್ಯದರ್ಶಿಗಳು, ಗ್ರಾಮೀಣ ಅಭಿವೃದ್ಧಿ ಮಂತ್ರಾಲ0ಯ, ಭಾರತ ಸರಕಾರ

**ಶ್ರೀ ರಘುನಂದನ್ ರಾಘವನ್,**
ಮಾಜಿ ಜಂಟಿ ಕಾರ್ಯದರ್ಶಿ, ಪಂಚಾಯತ್ ರಾಜ್ ಮಂತ್ರಾಲಯ ಭಾರತ ಸರ್ಕಾರ, ಪ್ರಧಾನ ಕಾರ್ಯದರ್ಶಿ ಕರ್ನಾಟಕ ಸರ್ಕಾರ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಕಾರ್ಯದರ್ಶಿ

**ಶ್ರೀ. ಮಹಿಮಾ ಪಟೇಲ್**
ಟ್ರಸ್ಟೀ, ಜೆ.ಹೆಚ್. ಪಟೇಲ್ ಫೌಂಡೇಶನ್

**ಶ್ರೀ ಮೈಕೆಲ್ ಫೆರ್ನಾಡಿಸ್**
ಕಾರ್ಮಿಕ ಮುಖಂಡರು

**ಶ್ರೀ ವಿನಯ್ ಬೈಂದೂರು**
ಸಂಶೋಧಕರು, ವಿಕೇಂದ್ರಿಕರಣ

**ಶ್ರೀಮತಿ ನಂದನಾ ರೆಡ್ಡಿ**
ಸಂಚಾಲಕರು

***ಸಂಯೋಜನಾ ಸಮಿತಿ:***

**ಗ್ರಾಮ ಸ್ವರಾಜ್ಯ ವೇದಿಕೆ**
**ಮಹಿಳಾ ಸಮಖ್ಯ ಕರ್ನಾಟಕ**
**ದಿ ಕನ್ಸರ್ನ್ಡ್ ಫಾರ್ ವರ್ಕಿಂಗ್ ಚಿಲ್ಡ್ರನ್**
**ಸುಗ್ರಾಮ**
**ಜೆ.ಹೆಚ್.ಪಟೇಲ್ ಫೌಂಡೇಶನ್**

***ಸಂಯೋಜಕರು:***

**ದಿ ಕನ್ಸರ್ನ್ಡ್ ಫಾರ್ ವರ್ಕಿಂಗ್ ಚಿಲ್ಡ್ರನ್**
303/2, ಲಾಲ್ ಬಹದ್ದೂರ್ ಶಾಸ್ತ್ರಿ ನಗರ
ವಿಮಾನಪುರ ಅಂಚೆ
ಬೆಂಗಳೂರು-560 017
ಫೋನ್: 080-25234270, 25234272, 25234611
ಇ-ಮೇಲ್: cwc@pobox.com
cwcblr@gmail.com
ವೆಬ್:
www.theconcernedforworkingchildren.org